# ಪ್ರವಾದಿ ಮೀಕನ ಗ್ರಂಥ

## ಮುನ್ನುಡಿ

ಮೀಕನು ಯೆಶಾಯನ ಸಮಕಾಲೀನ ಪ್ರವಾದಿ. ಇಸ್ರಯೇಲಿನ ದಕ್ಷಿಣ ಪ್ರಾಂತ್ಯವಾದ ಜುದೇಯ ನಾಡಿಗೆ ಸೇರಿದವನು. ಉತ್ತರ ಪ್ರಾಂತ್ಯಗಳಿಗೆ ಬಂದೊದಗಲಿರುವ ದುರಂತವನ್ನು ಆಮೋಸ್ ಪ್ರವಾದಿ ಮುಂಚಿತವಾಗಿ ತಿಳಿಸಿದ್ದನು. ಅಂತೆಯೇ ದಕ್ಷಿಣ ಪ್ರಾಂತ್ಯಗಳಿಗೆ ಬರಲಿರುವ ಅನಾಹುತಗಳನ್ನು ಮೀಕನು ಮುಂತಿಳಿಸುತ್ತಾನೆ. ಜನರ ಅನ್ಯಾಯ ಹಾಗು ಅಕ್ರಮಗಳನ್ನು ದೇವರು ದಂಡಿಸುವರು ಎಂಬುದನ್ನು ಮೀಕನು ಸ್ಪಷ್ಟವಾಗಿ ಹೇಳುತ್ತಾನೆ. ಅಂತೂ ಅವನ ಸಂದೇಶ ಜುದೇಯದ ಉಜ್ವಲ ಭವಿಷ್ಯದ ಚಿಹ್ನೆಗಳನ್ನು ಒಳಗೊಂಡಿದೆ.

ಸಾರ್ವತ್ರಿಕ ಶಾಂತಿ (4:1–4); ದಾವೀದ ವಂಶದಲ್ಲಿ ಜನಿಸುವ ಮಹಾರಾಜನಿಂದ ರಾಷ್ಟ್ರಕ್ಕೆ ಶಾಂತಿ ದೊರಕಲಿದೆ (5:2–4); ನ್ಯಾಯನೀತಿಯ ಪಾಲನೆ, ಪರರ ಮೇಲಿನ ಅಚಲ ಪ್ರೀತಿ, ದೇವರೊಡನೆ ನಮ್ರ ಸತ್ಸಂಬಂಧ – ಇವೇ ಎಲ್ಲಾ ಪ್ರವಾದನೆಗಳ ಸಾರಾಂಶ. ಮೀಕನ ಗ್ರಂಥದಲ್ಲೂ ಈ ಮುಖ್ಯಾಂಶಗಳು ಅಡಗಿವೆ.

## ಪರಿವಿಡಿ


| | | | | |
|---|---|---|---|---|
| 1. ಜುದೇಯ ನಾಡಿಗೆ ಬರಲಿರುವ ದಂಡನೆ | – | 1.1 | – | 3.12 |
| 2. ಶಾಂತಿಯ ಪುನರ್‌ಸ್ಥಾಪನೆ | – | 4.1 | – | 5.15 |
| 3. ಎಚ್ಚರಿಕೆ ಹಾಗೂ ನಿರೀಕ್ಷೆ | – | 6.1 | – | 7.20 |


**1** ಯೋಥಾಮ, ಆಹಾಜ, ಹಿಜ್ಕೀಯ ಇವರು ಜುದೇಯದ ಅರಸರು. ಇವರ ಕಾಲದಲ್ಲಿ ಮೋರೆಷೆತ್ ಊರಿನವನಾದ ಮೀಕನಿಗೆ ಒಂದು ದೈವದರ್ಶನವಾಯಿತು. ಅದು ಸಮಾರ್ಯ ಮತ್ತು ಜೆರುಸಲೇಮನ್ನು ಕುರಿತದ್ದಾಗಿತ್ತು.

### ಜೆರುಸಲೇಮ್ ಬಗ್ಗೆ ಶೋಕ

2 ಕೇಳಿರಿ ಸರ್ವಜನಾಂಗಗಳೇ
ಕಿವಿಗೊಡಿ ಬುವಿಯ ಸರ್ವನಿವಾಸಿಗಳೇ.
3 ಸಾಕ್ಷಿನುಡಿದಿಹನು ನಿಮ್ಮ ವಿರುದ್ಧ ಸರ್ವೇಶ್ವರ
ಪವಿತ್ರಾಲಯದಿಂದ
ಇಳಿದುಬರುತಿಹನಿದೋ ಸ್ವಾಮಿ ತನ್ನ
ಆಸ್ಥಾನದಿಂದ
ಜಗದ ಉನ್ನತ ಪ್ರದೇಶಗಳಲ್ಲಿ
ಸಂಚರಿಸಲಿಹನಾತ.
4 ಬೆಂಕಿಗೆ ಕರಗುವ ಮೇಣದಂತೆ
ಇಳಿಜಾರು ಪ್ರದೇಶದ ನೀರು ನೆಲವನ್ನು
ಕೊರೆವಂತೆ

ಕರಗಿಹೋಗುವುವು ಆತನ ಪಾದದಡಿ
ಪರ್ವತಗಳು;
ಸೀಳಿಹೋಗುವುವು ಕೊಲ್ಲಿಗಳು.
5 ಇದಕ್ಕೆಲ್ಲಾ ಕಾರಣ ಯಕೋಬನ ದ್ರೋಹ. ಇಸ್ರಯೇಲ್ ಮನೆತನದ ಪಾಪ. ಯಕೋಬನ
ದ್ರೋಹಕ್ಕೆ ಕಾರಣ ಯಾವುದು? ಸಮಾರ್ಯ ಅಲ್ಲವೆ? ಜುದೇಯದ ವಿಗ್ರಹಾರಾಧನೆಯ ಸ್ಥಳ ಯಾವುದು?
ಜೆರುಸಲೇಮ್ ಅಲ್ಲವೆ? 6ಆದಕಾರಣ "ನಾನು ಸಮಾರ್ಯವನ್ನು ಧೂಳಿನ ರಾಶಿಯನ್ನಾಗಿಯೂ
ದ್ರಾಕ್ಷಾತೋಟಕ್ಕೆ ಒಳ್ಳೆಯ ಬಯಲನ್ನಾಗಿಯೂ ಮಾಡುವೆನು. ಕಲ್ಲುಹೆಂಟೆಗಳನ್ನು ಕಣಿವೆಗೆ ಸುರಿದು
ಬಿಡುವೆನು. ಅದರ ತಳಪಾಯವೇ ತೆರೆದು ಕಾಣುವಂತೆ ಮಾಡುವೆನು. 7ಅದರಲ್ಲಿನ ಎರಕದ ಪ್ರತಿಮೆಗಳನ್ನು
ಪುಡಿಪುಡಿ ಮಾಡುವೆನು. ಅದರ ಸಂಪಾದನೆಯೆಲ್ಲ ಅಗ್ನಿಗೆ ಆಹುತಿಯಾಗುವುದು. ಅವು ಸೂಳೆತನದಿಂದ
ಸಂಪಾದನೆಯಾದುವು, ಸೂಳೆತನದ ಸಂಪಾದನೆಯಾಗಿಯೇ ಪರರ ಪಾಲಾಗುವುದು," ಎಂದು ಸರ್ವೇಶ್ವರ
ಹೇಳುತ್ತಾರೆ.
8 ಆಗ ಮೀಕನು: "ಇದಕ್ಕಾಗಿ ನಾನು ಗೋಳಾಡಿ ರೋದಿಸುವೆನು; ಬೆತ್ತಲೆಯಾಗಿ ಬರಿಗಾಲಿನಲ್ಲಿ
ಪಾದಯಾತ್ರೆ ಮಾಡುವೆನು; ಗುಳ್ಳೆನರಿಗಳಂತೆ ಊಳಿಡುವೆನು, ಗೂಬೆಯಂತೆ ಘೂಂಕರಿಸುವೆನು.
9ಸಮಾರ್ಯಕ್ಕೆ ಬಿದ್ದ ಪೆಟ್ಟು ಗಡುಸಾದುದು. ಅದು ಜುದೇಯಕ್ಕೂ ತಾಕಿದೆ. ಅದು ನನ್ನ ಊರಾದ
ಜೆರುಸಲೇಮಿನ ಪುರದ್ವಾರವನ್ನು ಮುಟ್ಟಿದೆ," ಎಂದನು.

### ಜೆರುಸಲೇಮಿಗೆ ಶತ್ರುವಿನ ಮುತ್ತಿಗೆ

10 ಈ ವಿಷಯವನ್ನು ಗಾತ್ ಊರಿನವರಿಗೆ ತಿಳಿಸಬೇಡಿ; ಅಳಲೂಬೇಡಿ. ಬೇತ್ಲೆಯಪ್ರದಲ್ಲಿ,
ಧೂಳಿನಲ್ಲಿ ಬಿದ್ದು ಹೊರಳಾಡಿ. 11ಶಾಫೀರಿನವರೇ, ಬೆತ್ತಲೆಯಾಗಿ ಲಜ್ಜೆಗೆಟ್ಟು ತೊಲಗಿರಿ. ಚಾನಾನಿನವರಿಗೆ
ಹೊರಬರಲು ಧೈರ್ಯವಿಲ್ಲ. ಬೇತೇಲಿನವರ ಗೋಳಾಟ ಕೇಳಿಬಂದಾಗ, ಅಲ್ಲಿ ನಿಮಗೆ ಆಶ್ರಯವಿಲ್ಲವೆಂದು
ಗೊತ್ತಾಗುವುದು.
12 ಮಾರೋತಿನ ನಿವಾಸಿಗಳು ತಮ್ಮ ಸಂಕಟ ಪರಿಹಾರವಾಗುವುದೋ ಇಲ್ಲವೋ ಎಂದು ವೇದನೆ
ಪಡುತ್ತಾರೆ: ಏಕೆಂದರೆ ಸ್ವಾಮಿಯಿಂದ ಬಂದ ವಿಪತ್ತು ಜೆರುಸಲೇಮಿನ ಪುರದ್ವಾರವನ್ನು ಮುಟ್ಟಿದೆ.
13ಲಾಕೀಷಿನ ನಿವಾಸಿಗಳೇ, ನಿಮ್ಮ ಕುದುರೆಗಳನ್ನು ರಥಕ್ಕೆ ಹೂಡಿರಿ. ನಿಮ್ಮ ಊರೇ ಸಿಯೋನ್ ನಗರದ
ಪಾಪಕ್ಕೆ ಮೂಲ ಕಾರಣ. ಹೌದು, ಇಸ್ರಯೇಲಿನ ದ್ರೋಹಗಳು ನಿಮ್ಮಲ್ಲಿಯೇ ಕಾಣಿಸಿಕೊಂಡವು.
14ಆದಕಾರಣ ನೀವು ಮೋರೆತಷತ್‌ಗಾತ್ ಪಟ್ಟಣ ನಿವಾಸಿಗಳಿಗೆ ಕಪ್ಪ ಕಾಣಿಕೆಯಿತ್ತು
ಬೀಳ್ಕೊಡಬೇಕಾಗುವುದು. ಇಸ್ರಯೇಲಿನ ಅರಸರಿಗೆ ಅಕ್ಜೀಬಿನ ಮನೆತನದವರಿಂದ ವಂಚನೆಯಾಗುವುದು.
15 ಮಾರೇಷದವರೇ, ಆಕ್ರಮಣಕಾರನೊಬ್ಬನನ್ನು ನಿಮ್ಮ ಬಳಿಗೆ ಬರಮಾಡುವೆನು. ಇಸ್ರಯೇಲಿನ
ವೈಭವವು ಅದುಲ್ಲಾಮಿನ ಪಾಲಾಗುವುದು. 16ಜುದೇಯದ ನಿವಾಸಿಗಳೇ, ನಿಮ್ಮ ಮಕ್ಕಳು ಅಗಲಿ
ಸೆರೆಹೋಗಿದ್ದಾರೆ. ನಿಮ್ಮ ಮುದ್ದು ಮಕ್ಕಳಿಗಾಗಿ ತಲೆಬೋಳಿಸಿಕೊಳ್ಳಿ, ಮುಂಡನ ಮಾಡಿಸಿಕೊಳ್ಳಿ. ನಿಮ್ಮ
ಬೋಳುತಲೆಯ ರಣಹದ್ದಿನಂತೆ ನುಣ್ಣಗಿರಲಿ.

### ಬಡವರನ್ನು ಗೋಳಿಡಿಸುವವರ ದುರ್ಗತಿ

**2** ತಮ್ಮ ಹಾಸಿಗೆಯಲ್ಲೇ ಕುತಂತ್ರವನ್ನು ಕಲ್ಪಿಸಿಕೊಂಡು ಕೇಡನ್ನು ಬಗೆಯುವವರಿಗೆ ಧಿಕ್ಕಾರ! ಬೆಳಗಾದದ್ದೇ
ಅವರು ಕುತಂತ್ರವನ್ನು ಕಾರ್ಯಗತ ಮಾಡುತ್ತಾರೆ. ಆ ಸಾಮರ್ಥ್ಯ ಅವರ ಕೈಯಲ್ಲಿದೆ. 2ಇತರರ
ಹೊಲಗದ್ದೆಗಳನ್ನು ದುರಾಸೆಯಿಂದ ಆಕ್ರಮಿಸಿಕೊಳ್ಳುತ್ತಾರೆ. ಅಂತೆಯೇ ಮನೆಗಳನ್ನು ಅಪಹರಿಸುತ್ತಾರೆ. ಈ
ರೀತಿಯಲ್ಲಿ ಮನೆಯನ್ನೂ ಮಾಲೀಕನನ್ನೂ ಸ್ವತ್ತನ್ನೂ ಹಕ್ಕುದಾರನನ್ನೂ ತುಳಿದುಬಿಡುತ್ತಾರೆ.
3 ಆದುದರಿಂದ ಸರ್ವೇಶ್ವರ ಇಂತೆನ್ನುತ್ತಾರೆ: "ಈ ಪೀಳಿಗೆಯ ಮೇಲೆ ನಾನೇ ವಿನಾಶವನ್ನು
ಬರಮಾಡುತ್ತೇನೆ. ಆ ಕೇಡಿನಿಂದ ನೀವು ತಲೆತಪ್ಪಿಸಿಕೊಳ್ಳಲಾರಿರಿ. ತಲೆಯೆತ್ತಿ ನಡೆಯಲು ನಿಮಗೆ

ಸಾಧ್ಯವಾಗದು. ಕಾಲವು ಅಷ್ಟು ಹದಗೆಟ್ಟಿರುವುದು. 4ಆ ದಿನದಲ್ಲಿ ಜನರು ನಿಮ್ಮ ಬಗ್ಗೆ ಪರಿಹಾಸ್ಯಮಾಡಿ, ಲಾವಣಿ ಕಟ್ಟುವರು. "ಅಯ್ಯೋ, ಸಂಪೂರ್ಣವಾಗಿ ಸೂರೆಹೋದೆವಲ್ಲಾ, ಸ್ವಾಮಿ ನಮ್ಮ ಜನರ ಸ್ವತ್ತನ್ನು ಪರಾಧೀನ ಮಾಡಿಬಿಟ್ಟಿರಲ್ಲಾ. ಅಕಟಾ, ನಮ್ಮ ಹೊಲಗದ್ದೆಗಳನ್ನು ಕಸಿದುಕೊಂಡು ದೇವದ್ರೋಹಿಗಳಿಗೆ ಹಂಚಿಕೊಟ್ಟರಲ್ಲಾ!" ಎಂದು ರೋದಿಸುವರು.

5 ಹೀಗಿರಲು ನೂಲೆಳೆದು ಭೂಮಿಯನ್ನು ಹಂಚಿಕೊಡಲು ಸ್ವಾಮಿಯ ಸಭೆಯಲ್ಲಿ ಯಾರೂ ಇರುವುದಿಲ್ಲ. 6ಆಗ ಆ ಕೇಡುಕರು, "ಪ್ರವಾದನೆ ಮಾಡಬೇಡ. ಇಂಥ ವಿಷಯಗಳಲ್ಲಿ ಪ್ರವಾದನೆಯ ಮಾತೆತ್ತಕೂಡದು. ಆ ವಿನಾಶ ನಮಗೆ ತಟ್ಟುವುದಿಲ್ಲ. 7ಯಕೋಬ ವಂಶವು ಶಾಪಗ್ರಸ್ಥವಾಗಲು ಸಾಧ್ಯವೆ? ಸರ್ವೇಶ್ವರ ತಾಳ್ಮೆಗೆಡುವುದುಂಟೆ? ಇಂಥ ಕೃತ್ಯಗಳನ್ನು ಅವರು ಮಾಡಿಯಾರೆ? ಸನ್ಮಾರ್ಗದಲ್ಲಿ ನಡೆಯುವವರಿಗೆ ಸ್ವಾಮಿಯ ವಾಕ್ಯ ಒಳಿತನ್ನುಂಟು ಮಾಡುವುದಿಲ್ಲವೆ?" ಎನ್ನುವರು.

8 ಅದಕ್ಕೆ ಸರ್ವೇಶ್ವರ: "ಇತ್ತೀಚೆಗೆ ನನ್ನ ಜನರಿಗೆ ನೀವೇ ಶತ್ರುಗಳು. ಜಗಳಮಾಡಲು ಒಪ್ಪದೆ, ಸಮಾಧಾನದಿಂದ ತಿರುಗಾಡುವವರ ಮೇಲಂಗಿಯನ್ನು ಕಸಿದುಕೊಳ್ಳುತ್ತೀರಿ. 9ನನ್ನ ಜನಾಂಗಕ್ಕೆ ಸೇರಿದ ಮಹಿಳೆಯರನ್ನು ಪ್ರಿಯವಾದ ಅವರ ಗೃಹಗಳಿಂದ ಹೊರದಬ್ಬುತ್ತೀರಿ. ಅವರ ಹಸುಳೆಗಳಿಗೆ ನನ್ನ ಆಶೀರ್ವಾದ ಇನ್ನೆಂದಿಗೂ ಲಭಿಸದಂತೆ ಮಾಡುತ್ತೀರಿ. 10ಎದ್ದು ತೊಲಗಿರಿ! ಇದು ನಿಮ್ಮ ನೆಮ್ಮದಿಯ ನೆಲೆಯಲ್ಲ. ನಿಮಗೆ ನಾಶವನ್ನು, ವಿಪರೀತ ನಾಶವನ್ನು ಉಂಟುಮಾಡುವ ಹೊಲಸು ಈ ನಾಡಿಗೆ ಅಂಟಿಕೊಂಡಿದೆ.

11 "ಗಾಳಿಮಾತಿನಿಂದ ಮೋಸಮಾಡುವಂಥ ಸುಳ್ಳುಗಾರನೊಬ್ಬನು: 'ದ್ರಾಕ್ಷಾರಸ, ಮದ್ಯ ಪಾನಗಳ ಕುರಿತು ಪ್ರವಾದನೆ ಮಾಡುತ್ತೇನೆ,' ಎಂದು ಹೇಳಿದರೆ ಅಂಥವನೇ ಈ ಜನರಿಗೆ ಸರಿಯಾದ ಪ್ರವಾದಿ ಎನಿಸಿಕೊಳ್ಳುವನು.

12 "ಯಕೋಬ ವಂಶಜರೇ, ನಾನು ನಿಮ್ಮನ್ನೆಲ್ಲಾ ಖಂಡಿತವಾಗಿ ಒಟ್ಟುಗೂಡಿಸುವೆನು. ಇಸ್ರಯೇಲಿನ ಅಳಿದುಳಿದ ಜನರನ್ನು ಸೇರಿಸಿಯೇ ಸೇರಿಸುವೆನು. ಹಟ್ಟಿಯಲ್ಲಿರುವ ಕುರಿಗಳಂತೆ ಅವರನ್ನು ಒಟ್ಟಿಗೆ ಸೇರಿಸುವೆನು. ಹುಲ್ಲುಗಾವಲಿನಲ್ಲಿರುವ ಕುರಿಮಂದೆಯಂತೆ ಒಂದುಗೂಡಿಸುವೆನು," ಎನ್ನುತ್ತಾರೆ.

13 ಬಾಗಿಲನ್ನು ಒಡೆದು ತೆರೆಯುವಂಥವನು ಜನರ ಮುಂದಾಳಾಗಿ ಹೊರಡುವನು; ಅವರೂ ಬಾಗಿಲನ್ನು ಒಡೆದು ನುಗ್ಗುವರು; ಅವರ ಅರಸನು ಮುಂದಾಳಾಗಿ ಹೋಗುವನು. ಸರ್ವೇಶ್ವರಸ್ವಾಮಿಯೇ ಅವರ ಮುಂದಾಳತ್ವವನ್ನು ವಹಿಸುವರು.

## ಇಸ್ರಯೇಲಿನ ಮುಖಂಡರ ಖಂಡನೆ

**3** ಆಗ ನಾನು ಇಂತೆಂದೆನು: "ಯಕೋಬ ವಂಶದ ಮುಖಂಡರೇ, ಇಸ್ರಯೇಲ್ ವಂಶದ ಅಧಿಪತಿಗಳೇ, ಕಿವಿಗೊಟ್ಟು ಕೇಳಿರಿ. ನ್ಯಾಯನೀತಿ ಪಾಲನೆ ನಿಮ್ಮ ಕರ್ತವ್ಯವಲ್ಲವೆ? 2ಆದರೂ ನೀವು ಒಳಿತನ್ನು ದ್ವೇಷಿಸುತ್ತೀರಿ. ಕೆಟ್ಟದ್ದನ್ನು ಬಯಸುತ್ತೀರಿ. ನನ್ನ ಜನರ ಚರ್ಮವನ್ನು ಜೀವಸಹಿತ ಸುಲಿಯುತ್ತೀರಿ. ಅವರ ಎಲುಬುಗಳಿಂದ ಮಾಂಸವನ್ನು ಕಿತ್ತು ತಿನ್ನುತ್ತೀರಿ. 3ನನ್ನ ಪ್ರಜೆಯ ಮೈ ಚರ್ಮವನ್ನು ಸುಲಿಯುವುದಲ್ಲದೆ ಅವರ ಎಲುಬುಗಳನ್ನು ಮುರಿದುಹಾಕುತ್ತೀರಿ. ಹಂಡೆಯಲ್ಲಿನ ತುಂಡುಗಳಂತೆ, ಆವಿಗೆಯಲ್ಲಿನ ಮಾಂಸದ ಚೂರುಗಳಂತೆ ನನ್ನ ಪ್ರಜೆಯನ್ನು ಚೂರುಚೂರಾಗಿ ಕತ್ತರಿಸಿಹಾಕಿದ್ದೀರಿ. 4ಇಷ್ಟೆಲ್ಲಾ ಮಾಡಿದಂಥ ನೀವು ಸರ್ವೇಶ್ವರಸ್ವಾಮಿಗೆ ಮೊರೆಯಿಡುತ್ತೀರಿ. ಆದರೆ ಅವರು ನಿಮಗೆ ಉತ್ತರ ಕೊಡುವುದಿಲ್ಲ. ಬದಲಿಗೆ ನಿಮ್ಮ ದುಷ್ಕೃತ್ಯಗಳ ನಿಮಿತ್ತ ನಿಮಗೆ ವಿಮುಖರಾಗುವರು."

5 ಜನರನ್ನು ಸನ್ಮಾರ್ಗದಿಂದ ದುರ್ಮಾರ್ಗಕ್ಕೆ ಎಳೆಯುವ ಪ್ರವಾದಿಗಳಿಗೆ ತಿನ್ನಲು ಏನಾದರೂ ಕೊಟ್ಟರೆ "ಶಾಂತಿ" ಎನ್ನುತ್ತಾರೆ. ಆದರೆ ತಿನ್ನಲು ಯಾರಾದರೂ ಕೊಡದಿದ್ದರೆ ಯುದ್ಧದ ಬೆದರಿಕೆ ಹಾಕುತ್ತಾರೆ. 6ಅಂಥ ಪ್ರವಾದಿಗಳಿಗೆ ಸರ್ವೇಶ್ವರ: "ಅಂಧಕಾರ ನಿಮ್ಮನ್ನು ಆವರಿಸುವುದು. ದಿವ್ಯ ದರ್ಶನ ನಿಮಗೆ ದೊರಕದು. ನಿಮಗೆ ಕತ್ತಲು ಕವಿದಂತಾಗಿ ಕಣಿಹೇಳಲು ಸಾಧ್ಯವಾಗದು. ಸೂರ್ಯ ನಿಮ್ಮ ಪಾಲಿಗೆ ಮುಳುಗಿದಂತೆಯೇ. ಹಗಲು ನಿಮಗೆ ಕಾರ್ಗತ್ತಲೆಯಂತೆಯೆ." 7ಹೀಗಾಗಿ ದಿವ್ಯದರ್ಶಿಗಳಿಗೆ

ಅವಮಾನವಾಗುವುದು. ಕಣಿ ಹೇಳುವವರಿಗೆ ನಾಚಿಕೆಯಾಗುವುದು. ಅವರೆಲ್ಲರೂ ಬಟ್ಟೆಯಿಂದ ಬಾಯಿ
ಮುಚ್ಚಿಕೊಳ್ಳಬೇಕಾಗುವುದು. ಕಾರಣ, ಅವರಿಗೆ ದೇವರಿಂದ ಯಾವ ಪ್ರತ್ಯುತ್ತರವೂ ಬರದು.
8 ನಾನಾದರೋ ಸರ್ವೇಶ್ವರಸ್ವಾಮಿಯ ಆತ್ಮಪ್ರೇರಣೆಯಿಂದ, ಅವರ ಬಲಪರಾಕ್ರಮದಿಂದ, ನ್ಯಾಯ
ನೀತಿಯಿಂದ ತುಂಬಿದವನು. ಯಕೋಬ ವಂಶಕ್ಕೆ ಅದರ ದ್ರೋಹವನ್ನು, ಇಸ್ರಯೇಲ್ ವಂಶಕ್ಕೆ ಅದರ
ಪಾಪವನ್ನು ಪ್ರಕಟಿಸಲು ಸಮರ್ಥನು. 9ನ್ಯಾಯಕ್ಕೆ ಹೇಸಿ, ನೆಟ್ಟಗಿರುವುದನ್ನು ಸೊಟ್ಟಗೆ ಮಾಡುವ ಯಕೋಬ
ವಂಶದ ಮುಖಂಡರೆ, ಇಸ್ರಯೇಲ್ ವಂಶದ ಅಧಿಪತಿಗಳೇ, ಗಮನಿಸಿರಿ. 10ಸಿಯೋನನ್ನು ನರಹತ್ಯೆಯಿಂದ,
ಜೆರುಸಲೇಮನ್ನು ಅನ್ಯಾಯದಿಂದ ಕಟ್ಟುತ್ತಿರುವ ನೀವು ಕಿವಿಗೊಟ್ಟು ಕೇಳಿರಿ. 11ನಿಮ್ಮ ಮುಖಂಡರು
ಲಂಚಕ್ಕಾಗಿ ನ್ಯಾಯತೀರಿಸುತ್ತಾರೆ. ನಿಮ್ಮ ಯಾಜಕರು ಸಂಬಳಕ್ಕಾಗಿ ಉಪದೇಶ ಮಾಡುತ್ತಾರೆ. ಆದರೂ
ಸರ್ವೇಶ್ವರ ಸ್ವಾಮಿಯ ಮೇಲೆ ಭಾರಹಾಕಿದವರಂತೆ, "ಸ್ವಾಮಿ ನಮ್ಮೊಡನೆ ಇಲ್ಲವೆ? ನಮಗೆ ಕೇಡು
ಸಂಭವಿಸುವುದಾದರೂ ಹೇಗೆ?" ಎಂದುಕೊಳ್ಳುತ್ತಾರೆ.
12 ಆದುದರಿಂದ ನಿಮ್ಮ ದೆಸೆಯಿಂದಲೇ ಸಿಯೋನ್ ಪಟ್ಟಣವನ್ನು ಹೊಲದಂತೆ ಉಳಲಾಗುವುದು.
ಜೆರುಸಲೇಮ್ ನಗರ ಹಾಳುದಿಬ್ಬವಾಗುವುದು. ದೇವಾಲಯದ ಪರ್ವತ ಕಾಡು ಗುಡ್ಡದಂತಾಗುವುದು.

### ಶಾಂತಿಯುತ ರಾಜ್ಯ

(ಯೆಶಾ. 2.1-4)

**4** ಕಾಲಾಂತ್ಯದೊಳು ಸರ್ವೇಶ್ವರನ
ದೇವಾಲಯವಿರುವ ಪರ್ವತ
ಬೆಳೆದು ನೆಲೆಗೊಳ್ಳುವುದು ಸರ್ವ
ಪರ್ವತಗಳಿಗಿಂತ ಉನ್ನತೋನ್ನತ
ಹರಿದು ಬರುವುವಾಗ ಜನಾಂಗಗಳು
ಪ್ರವಾಹದಂತೆ ಅದರತ್ತ.
2 ಈ ಪರಿ ಬಂದ ಹಲವು ನಾಡಿಗರು ಪೇಳ್ವರು
ಆನರಿಗೆ:
ಬನ್ನಿ, ಹೋಗೋಣ, ಸರ್ವೇಶ್ವರನ ಪರ್ವತಕೆ
ಯಕೋಬ್ಯರಾ ದೇವರ ಮಂದಿರಕೆ.
ಬೋಧಿಸುವನಾತ ತನ್ನ ಮಾರ್ಗವನು ನಮಗೆ
ನಡೆಯುವೆವು ನಾವು ಆತನ
ದಾರಿಗನುಗುಣವಾಗ್ಗೆ.
ಬರುವುದು ಧರ್ಮೋಪದೇಶ ಸಿಯೋನಿಂದ
ಸರ್ವೇಶ್ವರನಾ ವಾಕ್ಯ ಜೆರುಸಲೇಮಿನಿಂದ.
3 ಬಗೆಹರಿಸುವನಾತ ಹಲವು ರಾಷ್ಟ್ರಗಳಾ
ವ್ಯಾಜ್ಯವನು
ತೀರಿಸುವನು ಪ್ರಬಲ ಜನಾಂಗಗಳಿಗೆ
ನ್ಯಾಯವನು.
ಹಾಕುವರವರು ಕುಲುಮೆಗೆ ತಮ್ಮ ಕತ್ತಿಗಳನು
ಮಾರ್ಪಡಿಸುವರು ಅವುಗಳನ್ನು ಗುಳಗಳನ್ನಾಗಿ
ಭರ್ಜಿಗಳನ್ನೂ ಕುಡುಗೋಲುಗಳನ್ನಾಗಿ.
4 ನಿಲ್ಲದು ರಾಷ್ಟ್ರಕ್ಕೆ ವಿರುದ್ಧ ರಾಷ್ಟ್ರ ಯುದ್ಧಕ್ಕೆ
ಅವಶ್ಯವಿರದವಕ್ಕೆ ಯುದ್ಧವಿದ್ಯೆಯ ಕಲಿಕೆ.

ಕೂರುವರು ಪ್ರತಿಯೊರ್ವರು ತಂತಮ್ಮ
ದ್ರಾಕ್ಷಲತೆಗಳಡಿಯಲೆ
ಕೂರುವರವರು ತಂತಮ್ಮ ಅಂಜೂರ ಗಿಡಗಳ
ನೆರಳಲೆ
ಈ ಪರಿ ನುಡಿದಿಹನು ಸೇನಾಧೀಶ್ವರನಾದ
ಸರ್ವೇಶ್ವರನೆ.

5 ಅನ್ಯಜನಾಂಗಗಳು ತಮ್ಮ ತಮ್ಮ ದೇವರುಗಳ ನಾಮಸ್ಮರಣೆ ಮಾಡಿ, ಅದರಂತೆ ನಡೆದುಕೊಳ್ಳುತ್ತಾರೆ. ನಾವಾದರೋ ನಮ್ಮ ದೇವರಾದ ಸರ್ವೇಶ್ವರಸ್ವಾಮಿಯ ನಾಮವನ್ನು ಸ್ಮರಿಸಿ ಅದಕ್ಕನುಗುಣವಾಗಿ ಸದಾಕಾಲವೂ ನಡೆದುಕೊಳ್ಳುವೆವು.

## ಸಿಯೋನಿನ ಪುನರ್‍ಸ್ಥಾಪನೆ

6 ಸರ್ವೇಶ್ವರ ಇಂತೆನ್ನುತ್ತಾರೆ: "ಆ ದಿನಗಳಲ್ಲಿ ನಾನು ಅಂಗಹೀನರಾದವರನ್ನು ಒಟ್ಟುಗೂಡಿಸುವೆನು.
ಹೊರದೂಡಲಾದವರನ್ನು ಮತ್ತು ಸಂಕಟಕ್ಕೆ ಈಡಾದವರನ್ನು ಒಂದಾಗಿ ಸೇರಿಸುವೆನು. 7ಅಂಗಹೀನ
ಜನರನ್ನು ಉದ್ಧರಿಸಿ ಕಾಪಾಡುವೆನು. ಹೊರದೂಡಲಾದ ಪ್ರಜೆಯನ್ನು ಪ್ರಬಲ ರಾಷ್ಟ್ರವನ್ನಾಗಿ ಮಾಡುವೆನು.
ಸರ್ವೇಶ್ವರ ಸಿಯೋನ್ ಪರ್ವತದಲ್ಲಿ ಇಂದಿನಿಂದ ಎಂದೆಂದಿಗೂ ಅವರಿಗೆ ಅರಸರಾಗಿರುವರು."

8 ಜೆರುಸಲೇಮೇ, ಮಂದೆಗೆ ರಕ್ಷೆ ಕೊಡುವ ಗೋಪುರವೇ, ಸಿಯೋನ್ ಕುವರಿಯ ಸುಭದ್ರ
ಕೋಟೆಯೇ, ಹಿಂದಿನ ಆಡಳಿತ ನಿನಗೆ ಮರಳಿ ಲಭಿಸುವುದು. ಪ್ರಾಚೀನ ರಾಜ್ಯಾಧಿಕಾರ ಪುನಃ ನಿನಗೆ
ದೊರಕುವುದು. 9ನೀನೀಗ ರೋದಿಸುವುದೇಕೆ? ಪ್ರಸವವೇದನೆ ಪಡುವವಳಂತೆ ನರಳುವುದೇಕೆ? ನಿನಗೆ
ರಾಜನಿಲ್ಲವೇ? ನಿನ್ನ ಸಲಹೆಗಾರ ಸತ್ತುಹೋದನೇ? 10ಸಿಯೋನ್ ಕುವರಿಯೇ, ಪ್ರಸವವೇದನೆಯಿಂದ
ನರಳಾಡು; ಪಟ್ಟಣವನ್ನು ಬಿಟ್ಟು, ಬಯಲಿನಲ್ಲಿ ವಾಸಮಾಡು. ಬಾಬಿಲೋನಿಗೆ ತೆರಳು. ಅಲ್ಲೇ ನಿನಗೆ
ಉದ್ಧಾರವಾಗುವುದು. ಅಲ್ಲೇ ನಿನ್ನ ಶತ್ರುಗಳಿಂದ ಸರ್ವೇಶ್ವರ ಬಿಡುಗಡೆ ಮಾಡುವರು. 11ಹಲವು ರಾಷ್ಟ್ರಗಳು
ನಿನಗೆ ವಿರುದ್ಧ ಕೂಡಿಬಂದು: "ಜೆರುಸಲೇಮನ್ನು ಹೊಲಸುಮಾಡೋಣ, 'ಸಿಯೋನಿನ ನಾಶವನ್ನು ಕಣ್ಣಾರೆ
ನೋಡೋಣ' ಎನ್ನುತ್ತಿವೆ. 12ಆದರೆ ಸರ್ವೇಶ್ವರಸ್ವಾಮಿಯ ಆಲೋಚನೆಗಳನ್ನು ಅವರು ಅರಿತುಕೊಂಡಿಲ್ಲ.
ಆ ಸ್ವಾಮಿಯ ಉದ್ದೇಶವನ್ನು ಅವರು ಗ್ರಹಿಸಿಕೊಂಡಿಲ್ಲ; ಕಣಕ್ಕೆ ಹಾಕಿದ ಕಂತೆಗಳಂತೆ ಅವರನ್ನು ಸ್ವಾಮಿ
ಸೇರಿಸಿದ್ದಾರೆ ಎಂಬುದನ್ನು ಅವರು ಅರ್ಥೈಸಿಕೊಂಡಿಲ್ಲ."

13 ಸರ್ವೇಶ್ವರ ಇಂತೆನ್ನುತ್ತಾರೆ: "ಸಿಯೋನ್ ನಗರಿಯೇ, ಎದ್ದು ಒಕ್ಕಣೆ ಮಾಡು. ಇದಕ್ಕಾಗಿ ನಿನ್ನ ಕೊಂಬನ್ನು ಕಬ್ಬಿಣವಾಗಿಸುವೆನು. ನಿನ್ನ ಗೊರಸನ್ನು ಕಂಚನ್ನಾಗಿ ಮಾಡುವೆನು. ಅನೇಕ ರಾಷ್ಟ್ರಗಳನ್ನು ನೀನು ತುಳಿದು ಧ್ವಂಸಮಾಡುವೆ. ಅವುಗಳನ್ನು ಕೊಳ್ಳೆಹೊಡೆದು ತಂದ ಸ್ವತ್ತನ್ನು ಸರ್ವೇಶ್ವರಸ್ವಾಮಿಗೆ ಮೀಸಲಾಗಿಡುವೆ. ಅವುಗಳಿಂದ ಬಂದ ಆಸ್ತಿಯನ್ನು ಲೋಕದೊಡೆಯನಿಗೆ ಪ್ರತ್ಯೇಕಿಸಿಡುವೆ."

## ಇಸ್ರಯೇಲರನ್ನು ರಕ್ಷಿಸುವ ರಾಜ

**5** ಸಿಯೋನ್ ನಗರಿಯೇ, ನಿನ್ನ ಸೇನಾ ವ್ಯೂಹಗಳನ್ನು ಒಟ್ಟುಗೂಡಿಸು. ಇಗೋ, ಶತ್ರುಗಳು ನಮಗೆ ಮುತ್ತಿಗೆ ಹಾಕಿದ್ದಾರೆ. ಅವರು ಇಸ್ರಯೇಲಿನ ಅಧಿಪತಿಯ ಕೆನ್ನೆಗೆ ಕೋಲಿನಿಂದ ಹೊಡೆಯುವರು!

2 ಎಫ್ರಾತದ ಬೆತ್ಲೆಹೇಮೇ, ಜುದೇಯದ ಕುಲಗಳಲ್ಲಿ ನೀನು ಅತಿಚಿಕ್ಕವಳಾಗಿದ್ದರೂ ಇಸ್ರಯೇಲನ್ನು ಆಳತಕ್ಕವನು ನಿನ್ನಿಂದಲೇ ಉದಯಿಸುವನು. ಆತನ ಗೋತ್ರದ ಮೂಲ ಪುರಾತನವಾದುದು, ಅನಾದಿಕಾಲದಿಂದ ಬಂದುದು.

3 ಇಂತಿರಲು ದಿನತುಂಬಿದವಳು ಹೆರುವವರೆಗೂ ಸರ್ವೇಶ್ವರ ತನ್ನ ಜನರನ್ನು ಶತ್ರುಗಳ ವಶಕ್ಕೆ
ಬಿಟ್ಟುಬಿಡುವರು. ಅನಂತರ ಅಳಿದುಳಿದ ಸಹೋದರರು ಬಂದು ಇಸ್ರಯೇಲ್ ಜನರೊಂದಿಗೆ
ಸೇರಿಕೊಳ್ಳುವರು. 4ಆತನು ಸರ್ವೇಶ್ವರನಿಂದ ಬರುವ ಶಕ್ತಿಯಿಂದಲೂ ಆ ಸ್ವಾಮಿ ದೇವರ ನಾಮದ

ಪ್ರಭಾವದಿಂದಲೂ ತನ್ನ ಜನರನ್ನು ಪರಿಪಾಲಿಸುವನು. ಆ ಜನರು ಸುರಕ್ಷಿತವಾಗಿ ಬಾಳುವರು. ಆತನು ಜಗದ ಕಟ್ಟಕಡೆಯವರೆಗೂ ಪ್ರಬಲನಾಗಿರುವನು.

**ಬಿಡುಗಡೆ – ದಂಡನೆ**

5 ಆತನೇ ನಮಗೆ ಶಾಂತಿದಾತನು. ಅಸ್ಸೀರಿಯದವರು ನಮ್ಮ ಮೇಲೆ ದಾಳಿಮಾಡಿ ಆಕ್ರಮಣ
ಮಾಡುವಾಗ, ಅವರಿಗೆ ವಿರುದ್ಧ ಏಳುಮಂದಿ ಪಾಲಕರನ್ನು ಹಾಗೂ ಎಂಟುಮಂದಿ ಪುರುಷೋತ್ತಮರನ್ನು
ನೇಮಿಸುವೆನು. 6ಅಸ್ಸೀರಿಯದವರು ಇವರ ಶಸ್ತ್ರಾಸ್ತ್ರಗಳಿಗೆ ತುತ್ತಾಗುವರು. ನಿಮ್ರೋದ್ ಸೀಮೆಯ
ಪ್ರವೇಶದ್ವಾರಗಳು ಧ್ವಂಸವಾಗುವುವು. ಅಸ್ಸೀರಿಯದವರು ನಮ್ಮ ನಾಡಿಗೆ ನುಗ್ಗಿ ನಮ್ಮ ಕೋಟೆಯನ್ನು
ಆಕ್ರಮಿಸುವಾಗ, ಆ ಶಾಂತಿದಾತನು ನಮ್ಮನ್ನು ರಕ್ಷಿಸುವನು.

7 ಸರ್ವೇಶ್ವರಸ್ವಾಮಿಯ ಕೃಪೆಯಿಂದ ಇಬ್ಬನಿಯೂ ತುಂತುರುಮಳೆಯೂ ಮಾನವನ ನೆರವನ್ನು
ನಿರೀಕ್ಷಿಸದೆ, ಹುಲ್ಲನ್ನು ಸಮೃದ್ಧಿಗೊಳಿಸುತ್ತವೆ. ಅಂತೆಯೇ ಯಕೋಬನ ಅಳಿದುಳಿದ ವಂಶದವರು
ಹಲವಾರು ಜನಾಂಗಗಳ ಮಧ್ಯೆ ನೆಲಸಿ, ಅವರ ಅಭ್ಯುದಯಕ್ಕೆ ಕಾರಣರಾಗುವರು. 8ಸಿಂಹವು ತಿರುಗಾಡುತ್ತಾ
ಕಾಡುಮೃಗಗಳನ್ನು ಕಬಳಿಸುತ್ತದೆ. ಪ್ರಾಯದ ಸಿಂಹವು ಓಡಾಡುತ್ತಾ ಸುರಕ್ಷಣೆಯಿಲ್ಲದ ಕುರಿಮಂದೆಗಳನ್ನು
ಸೀಳಿ ಹಾಕುತ್ತದೆ. ಅಂತೆಯೇ ಯಕೋಬನ ಅಳಿದುಳಿದ ಜನರು ದೇಶವಿದೇಶಗಳ ಹಲವಾರು ರಾಷ್ಟ್ರಗಳ
ನಡುವೆ ನಾಶಕರವಾಗಿರುವರು. 9ಯಕೋಬ ವಂಶಜರೇ, ನಿಮ್ಮ ಎದುರಾಳಿಗಳ ಮೇಲೆ ನಿಮಗೆ ಜಯ
ಲಭಿಸಲಿ. ನಿಮ್ಮ ಶತ್ರುಗಳೆಲ್ಲಾ ನಿರ್ಮೂಲವಾಗಲಿ.

10 ಸರ್ವೇಶ್ವರ ಇಂತೆನ್ನುತ್ತಾರೆ: "ಆ ದಿನದಂದು ಕುದುರೆಗಳನ್ನು ಕಡಿದುಬಿಡುವೆನು. ನಿಮ್ಮ
ರಥಗಳನ್ನು ಧ್ವಂಸಮಾಡುವೆನು. 11ನಿಮ್ಮ ಪಟ್ಟಣಗಳನ್ನು ಹಾಳುಮಾಡುವೆನು; ನಿಮ್ಮ ಕೋಟೆ ಕೊತ್ತಲಗಳನ್ನು
ಕೆಡವಿಬಿಡುವೆನು. 12ನಿನ್ನ ನುರಿತ ಮಂತ್ರತಂತ್ರಗಳನ್ನು ನಿಲ್ಲಿಸಿಬಿಡುವೆನು. ನಿನ್ನ ಮಂತ್ರವಾದಿಗಳನ್ನು
ನಿರ್ಮೂಲ ಮಾಡುವೆನು. 13ನೀನು ಕೆತ್ತಿದ ವಿಗ್ರಹಗಳನ್ನು ಒಡೆದುಹಾಕಿ, ನೀನು ನಿಲ್ಲಿಸಿದ ಕಲ್ಲುಕಂಬಗಳನ್ನು
ಉರುಳಿಸಿ ಬಿಡುವೆನು. ನಿನ್ನ ಕೈಗೆಲಸವಾದ ವಿಗ್ರಹಗಳನ್ನು ನೀನು ಪೂಜಿಸದಂತೆ ಮಾಡುವೆನು. 14ನಿನ್ನ
ಆಶೇರಾ ದೇವತೆಯ ವಿಗ್ರಹಗಳನ್ನು ಕಿತ್ತೊಗೆದು, ನಿನ್ನ ಪಟ್ಟಣಗಳನ್ನು ನೆಲಸಮ ಮಾಡುವೆನು. ನನ್ನ
ಮಾತನ್ನು ಕೇಳದ ರಾಷ್ಟ್ರಗಳಿಗೆ ಉಗ್ರಕೋಪದಿಂದ ಮುಯ್ಯಿತೀರಿಸುವೆನು."

**ಇಸ್ರಯೇಲಿನ ವಿರುದ್ಧ ವ್ಯಾಜ್ಯ**

**6** ಸರ್ವೇಶ್ವರ ಹೇಳುವುದನ್ನು ಕೇಳಿರಿ: "ಎದ್ದೇಳು; ಬೆಟ್ಟಗಳ ಸಮ್ಮುಖದಲ್ಲಿ ನಿನ್ನ ವ್ಯಾಜ್ಯ ನಡೆಯಲಿ; ನಿನ್ನ
ಧ್ವನಿ ಗುಡ್ಡಗಳಿಗೆ ಕೇಳಿಸಲಿ.

2 "ಬೆಟ್ಟಗಳೇ, ಸರ್ವೇಶ್ವರಸ್ವಾಮಿಯ ಆಪಾದನೆಯನ್ನು ಕೇಳಿರಿ. ಭೂಮಿಯ ಸ್ಥಿರವಾದ
ಅಸ್ತಿಭಾರಗಳೇ, ಕಿವಿಗೊಡಿ. ಆ ಸ್ವಾಮಿಗೆ ತನ್ನ ಪ್ರಜೆಯ ಮೇಲೆ ವ್ಯಾಜ್ಯವಿದೆ; ಅವರು ಇಸ್ರಯೇಲಿನ ವಿರುದ್ಧ
ವಾದಿಸುವುದನ್ನು ಗಮನಿಸಿರಿ."

3 ಸರ್ವೇಶ್ವರ ಇಂತೆನ್ನುತ್ತಾರೆ: "ನನ್ನ ಪ್ರಜೆಯೇ, ನಾನು ನಿನಗೇನು ಮಾಡಿದೆ? ಯಾವ ವಿಷಯದಲ್ಲಿ
ನಿನಗೆ ಬೇಸರವನ್ನುಂಟುಮಾಡಿದೆ? ಪ್ರಮಾಣವಾಗಿ ಹೇಳು. 4ಈಜಿಪ್ಟ್ ದೇಶದಿಂದ ನಾನು ನಿನ್ನನ್ನು
ಕರೆತಂದೆ; ದಾಸತ್ವದ ಬಂಧನದಿಂದ ನಿನ್ನನ್ನು ಬಿಡುಗಡೆ ಮಾಡಿದೆ. ನಿನಗೆ ಮೋಶೆ, ಆರೋನ್ ಮತ್ತು
ಮಿರ್ಯಾಮಳನ್ನು ನಾಯಕರನ್ನಾಗಿ ಕಳುಹಿಸಿದೆ. 5ನನ್ನ ಜನರೇ, ಮೋವಾಬಿನ ಅರಸನಾದ ಬಾಲಾಕನು ಕೊಟ್ಟ
ಸಲಹೆಯನ್ನು ನೆನಪಿಗೆ ತಂದುಕೊಳ್ಳಿ. ಬೆಯೋರನ ಮಗನಾದ ಬಿಳಾಮನು ಕೊಟ್ಟ ಉತ್ತರವನ್ನು
ಜ್ಞಾಪಿಸಿಕೊಳ್ಳಿ. ನೀವು ತಿಟ್ಟೀಮನ್ನು ಬಿಟ್ಟಂದಿನಿಂದ ಗಿಲ್ಗಾಲನ್ನು ಸೇರುವತನಕ ನಡೆದುದನೆಲ್ಲಾ ಸ್ಮರಿಸಿಕೊಳ್ಳಿ.
ಆಗ ಸರ್ವೇಶ್ವರ ನಿಮ್ಮನ್ನು ರಕ್ಷಿಸಲು ಮಾಡಿದ ಮಹತ್ಕಾರ್ಯಗಳು ನಿಮಗೆ ಮನದಟ್ಟಾಗುವುವು."

## ಸರ್ವೇಶ್ವರನ ಶರತ್ತುಗಳು

6 ನಾನು ಸರ್ವೇಶ್ವರಸ್ವಾಮಿಯ ಸನ್ನಿಧಿಗೆ ಯಾವ ಕಾಣಿಕೆಯೊಂದಿಗೆ ಹೋಗಲಿ? ಮಹೋನ್ನತ ದೇವರಿಗೆ ಹೇಗೆ ಅಡ್ಡಬೀಳಲಿ? ಹೋಮಕ್ಕಾಗಿ, ಒಂದು ವರ್ಷದ ಎಳೆಕರುಗಳನ್ನು ತೆಗೆದುಕೊಂಡು ಹೋಗಲೇ?
7ಸಾವಿರಾರು ಟಗರುಗಳನ್ನೂ ಧಾರಾಕಾರವಾಗಿ ಹರಿಯುವ ತೈಲ ಪ್ರವಾಹಗಳನ್ನು ನೋಡಿ ಸರ್ವೇಶ್ವರ ಮೆಚ್ಚುವುದುಂಟೆ? ನಾನು ಮಾಡಿದ ದ್ರೋಹಕ್ಕಾಗಿ ನನ್ನ ಚೊಚ್ಚಲುಮಗನನ್ನೇ ಅರ್ಪಿಸಲೇ? ನನ್ನ ಪಾಪಕ್ಕಾಗಿ ನನ್ನ ಕರುಳ ಕುಡಿಯನ್ನೇ ಬಲಿಕೊಡಲೇ?
8ಇಲ್ಲ ಮನುಜಾ, ನಿನಗೆ ಯಾವುದು ಒಳಿತೆಂದು ಸರ್ವೇಶ್ವರ ಈಗಾಗಲೇ ಸ್ಪಷ್ಟಪಡಿಸಿದ್ದಾರೆ: ನ್ಯಾಯನೀತಿಯ ನಡವಳಿಕೆ, ಕರುಣೆಯಲ್ಲಿ ಅಚಲ ಆಸಕ್ತಿ, ದೇವರ ಮುಂದೆ ನಮ್ರತೆ, ಇಷ್ಟನ್ನೇ ಆ ಸ್ವಾಮಿ ನಿನ್ನಿಂದ ಅಪೇಕ್ಷಿಸುವುದು.

## ಇಸ್ರಯೇಲಿನ ಭ್ರಷ್ಟಾಚಾರ

9 ಸರ್ವೇಶ್ವರ ಸ್ವಾಮಿಯಲ್ಲಿ ಭಯಭಕ್ತಿಯಿಂದಿರುವುದು ಸುಜ್ಞಾನ. ಇದು ಆ ಸ್ವಾಮಿಯ ವಾಣಿ; ಪಟ್ಟಣಕ್ಕೆ ನೀಡುವ ಎಚ್ಚರಿಕೆಯ ಕರೆ:
10"ನಗರದ ಸಭಿಕರೇ, ಕೇಳಿ! ಅಕ್ರಮವಾಗಿ ಗಳಿಸಿದ ಆಸ್ತಿ ದುರುಳರ ಮನೆಯಲ್ಲಿರುವುದು ನನಗೆ ಗೊತ್ತಿಲ್ಲವೆ? ಅವರ ಮೋಸದ ಅಳತೆಗಳನ್ನು ನಾನು ಒಪ್ಪುವುದು ಸಾಧ್ಯವೆ?
11ಕಳ್ಳ ತಕ್ಕಡಿಗಳಿಂದ ಮೋಸದ ಬಟ್ಟುಗಳಿಂದ ಅಳೆದು ಹಾಕುವವನು ನಿರ್ದೋಷಿಯೆಂದು ತೀರ್ಮಾನಿಸಲೆ?
12ನಿಮ್ಮ ಧನಿಕರು ಹಿಂಸಾತ್ಮಕರು; ನಿಮ್ಮ ನಿವಾಸಿಗಳು ಸುಳ್ಳುಗಾರರು! ಅವರ ಬಾಯಿ ಮಾತು ಕಪಟ.
13ಆದಕಾರಣ ನಿಮ್ಮನ್ನು ಕಠಿಣವಾಗಿ ದಂಡಿಸುವೆನು. ನಿಮ್ಮ ಪಾಪದ ನಿಮಿತ್ತ ನಾಶವಾಗುವಿರಿ.
14ಎಷ್ಟು ತಿಂದರೂ ನಿಮಗೆ ತೃಪ್ತಿಯಾಗದು; ನಿಮ್ಮಲ್ಲಿ ಹಸಿವು ಇದ್ದೇ ಇರುತ್ತದೆ. ನೀವು ಎಷ್ಟು ಕೂಡಿಸಿಟ್ಟರೂ ಅದು ನಿಮಗೆ ಉಳಿಯುವುದಿಲ್ಲ; ಏಕೆಂದರೆ ಉಳಿದುದ್ದನ್ನು ಕದನದಲ್ಲಿ ಹಾಳಾಗಿಸುವೆನು.
15ನೀವು ಬೀಜವನ್ನು ಬಿತ್ತಿದರೂ ಬೆಳೆಯನ್ನು ಕೊಯ್ಯಲಾರಿರಿ. ಕಾಳನ್ನು ಗಾಣಕ್ಕೆ ಸುರಿದರೂ ಎಣ್ಣೆಯನ್ನು ತೆಗೆಯಲಾರಿರಿ. ದ್ರಾಕ್ಷಿಯನ್ನು ಆಲೆಮನೆಗೆ ಹಾಕಿದರೂ ದ್ರಾಕ್ಷಾರಸವನ್ನು ಕುಡಿಯಲಾರಿರಿ.
16 "ಒಮ್ರಿ ಅರಸನ ಆಜ್ಞೆಗಳನ್ನೂ ಅಹಾಬ್ ಮನೆತನದ ದುರಾಚಾರಗಳನ್ನೂ ಅವರ ಸಂಪ್ರದಾಯಗಳನ್ನೂ ಅನುಸರಿಸುತ್ತಾ ಬಂದಿದ್ದೀರಿ. ಆದಕಾರಣ ನಿಮ್ಮನ್ನು ವಿನಾಶಗೊಳಿಸುವೆನು; ನಿಮ್ಮ ಜನರನ್ನು ಅಪಹಾಸ್ಯಕ್ಕೆ ಈಡುಮಾಡುವೆನು. ನೀವು ಜನಾಂಗಗಳ ನಿಂದೆಗೆ ಗುರಿಯಾಗುವಿರಿ."

## ಇಸ್ರಯೇಲಿನ ಕೊರಗು

**7** ಅಯ್ಯೋ, ನನ್ನ ಗತಿ ಏನೆಂದು ಹೇಳಲಿ? ಬೇಸಿಗೆಯಲ್ಲಿ ಬೆಳೆಯನ್ನು ಕೊಯ್ಯಲು ಬಂದವನಂತೆ ಇದ್ದೇನೆ. ಹಕ್ಕಲನ್ನು ಆಯ್ದಮೇಲೆ ದ್ರಾಕ್ಷಿಹಣ್ಣನ್ನು ಕೊಯ್ಯಲು ಬಂದವನಂತೆ ಇದ್ದೇನೆ. ತಿನ್ನುವುದಕ್ಕೆ ಒಂದು ಗೊಂಚಲು ಸಹ ಉಳಿದಿಲ್ಲ. ನನಗೆ ಇಷ್ಟವಾದ ದೋರೆ ಅಂಜೂರ ಕೂಡ ಸಿಕ್ಕುತ್ತಿಲ್ಲ.
2ನಾಡಿನಲ್ಲಿ ದೈವಭಕ್ತರೆಲ್ಲರು ನಾಶವಾದರು; ಸಜ್ಜನರಾರೂ ಉಳಿದಿಲ್ಲ. ಇರುವವರು ಬಲೆಯೊಡ್ಡಿ ಒಬ್ಬರನ್ನೊಬ್ಬರು ಬೇಟೆಯಾಡುತ್ತಾರೆ. ರಕ್ತಪಾತಕ್ಕಾಗಿ ಹೊಂಚುಹಾಕುತ್ತಾರೆ.
3ದುಷ್ಕೃತ್ಯಗಳನ್ನು ಮಾಡುವುದರಲ್ಲಿ ಅವರದು ನುರಿತಕೈ. ಅಧಿಕಾರಿಗಳು ಮತ್ತು ನ್ಯಾಯಾಧಿಪತಿಗಳು ಲಂಚಕ್ಕಾಗಿ ಕೈಯೊಡ್ಡುತ್ತಾರೆ. ದೊಡ್ಡ ದೊಡ್ಡ ವ್ಯಕ್ತಿಗಳು ತಮ್ಮ ಅಂತರಂಗದ ದುರಾಸೆಯನ್ನು ವ್ಯಕ್ತಪಡಿಸುತ್ತಾರೆ. ಎಲ್ಲರು ಒಟ್ಟಿಗೆ ಸೇರಿ ಒಳಸಂಚು ಮಾಡುತ್ತಾರೆ.
4ಅವರಲ್ಲಿ ಅತ್ಯುತ್ತಮನಾದವನೂ ಮುಳ್ಳಿನ ಪೊದೆಗೆ ಸಮಾನ. ಸತ್ಯವಂತನೂ ಮುಳ್ಳುಬೇಲಿಗಿಂತ ಕಡೆ.

ಜನರ ದಂಡನೆಯ ದಿನ ಸಮೀಪಿಸಿದೆ. ಅವರ ಕಾವಲುಗಾರರಾದ ಪ್ರವಾದಿಗಳು ಮುಂತಿಳಿಸಿದ ಕಾಲ ಬಂದಿದೆ. ಜನರೆಲ್ಲರು ದಿಗ್ಭ್ರಾಂತರಾಗುವರು.
5ನೆರೆಯವನನ್ನು ನಂಬಬೇಡ, ಆಪ್ತನಲ್ಲಿ ಭರವಸೆ ಇಡಬೇಡ. ನಿನ್ನೊಡನೆ ಮಲಗುವ ಮಡದಿಯೊಂದಿಗೂ ಬಾಯಿಬಿಡಬೇಡ.
6ಮಗನು ತಂದೆಯನ್ನು ತುಚ್ಛೀಕರಿಸುವನು; ಮಗಳು ತಾಯಿಗೆ ಎದುರಾಗಿರುವಳು; ಸೊಸೆ ಅತ್ತೆಯೊಂದಿಗೆ ಜಗಳವಾಡುವಳು. ಹೀಗೆ ಮನುಷ್ಯನಿಗೆ ತನ್ನ ಮನೆಯವರೇ ವೈರಿಗಳಾಗುವರು.

7 ನಾನಾದರೋ ಸರ್ವೇಶ್ವರನ ಕಡೆಗೆ ಕಣ್ಣೆತ್ತಿ ನೋಡುವೆನು. ನನ್ನ ಉದ್ಧಾರಕ ದೇವರನ್ನು ನಿರೀಕ್ಷಿಸಿ ಕೊಂಡಿರುವೆನು. ನನ್ನ ದೇವರು ನನಗೆ ಕಿವಿಗೊಡುವರು.

**ಸರ್ವೇಶ್ವರನಿಂದ ಜೀವೋದ್ಧಾರ**

8 ನನ್ನ ಶತ್ರುಗಳೇ, ನನ್ನನ್ನು ನೋಡಿ ಹಿಗ್ಗಬೇಡಿ. ನಾನು ಬಿದ್ದು ಹೋದರೂ, ಎದ್ದೇಳುವೆನು; ಕತ್ತಲೆಯಲ್ಲಿ ಕುಳಿತಿದ್ದರೂ ಸರ್ವೇಶ್ವರ ನನಗೆ ಬೆಳಕಾಗುವರು. 9ಆ ಸ್ವಾಮಿಗೆ ವಿರುದ್ಧ ನಾನು ಪಾಪಮಾಡಿದ್ದರಿಂದ ಅವರ ಕೋಪವನ್ನು ನಾನು ಸಹಿಸಿಕೊಳ್ಳಬೇಕಾಗುತ್ತದೆ. ಅವರು ನನ್ನ ಪರವಾಗಿ ವಾದಿಸಿ ನನಗಾದ ಅನ್ಯಾಯವನ್ನು ನೀಗಿಸುವರು; ನನ್ನನ್ನು ಕತ್ತಲೆಯಿಂದ ಬೆಳಕಿಗೆ ತರುವರು. ಅವರಿಂದ ಬರುವ ರಕ್ಷಣಾನೀತಿಯನ್ನು ಆಗ ಸವಿಯುವೆನು.

10 ಇದನ್ನು ನನ್ನ ಶತ್ರುಗಳು ನೋಡುವರು. "ನಿನ್ನ ದೇವರಾದ ಸರ್ವೇಶ್ವರನೆಲ್ಲಿ?" ಎಂದು ನನ್ನನ್ನು ಜರೆದವರೇ ನಾಚಿಕೆಪಡುವರು. ಇದನ್ನು ನಾನು ಕಣ್ಣಾರೆ ಕಾಣುವೆನು. ಆ ಶತ್ರುಗಳಾದರೋ ಬೀದಿಯ ಕಸದಂತೆ ದಾರಿಹೋಕರ ತುಳಿತಕ್ಕೆ ಈಡಾಗುವರು. 11ಜೆರುಸಲೇಮಿನ ನಿವಾಸಿಗಳೇ, ನಿಮ್ಮ ಕೋಟೆಯ ಗೋಡೆಗಳನ್ನು ಮರಳಿ ಎಬ್ಬಿಸುವ ದಿನ ಬರುವುದು. ಅಂದು ನಿಮ್ಮ ಗಡಿಯ ವಿಸ್ತರಣೆ ಆಗುವುದು. 12ಅಂದು ಜನರು ಅಸ್ಸೀರಿಯದಿಂದಲೂ ಈಜಿಪ್ಟಿನಿಂದಲೂ ನಿಮ್ಮ ಬಳಿಗೆ ಬಂದುಸೇರುವರು. ಸಮುದ್ರದಿಂದ ಸಮುದ್ರದವರೆಗೂ ಪರ್ವತದಿಂದ ಪರ್ವತದವರೆಗೂ ಈಜಿಪ್ಟಿನಿಂದ ಯೂಫ್ರೆಟಿಸ್ ನದಿಯವರೆಗೂ ಚದರಿಹೋಗಿರುವ ಜನರೆಲ್ಲರು ನಿನ್ನೆಡೆಗೆ ಬರುವರು. 13ಆದರೆ ನಾಡು ಅದರ ನಿವಾಸಿಗಳ ನಿಮಿತ್ತ ಹಾಗೂ ಅವರ ದುಷ್ಕೃತ್ಯಗಳ ಪರಿಣಾಮವಾಗಿ, ಮರಳುಗಾಡಾಗಿ ಮಾರ್ಪಡುವುದು.

**ಇಸ್ರಯೇಲರ ಮೇಲೆ ದೇವರ ಕರುಣೆ**

14 ಸರ್ವೇಶ್ವರಾ, ನಿಮ್ಮ ಮಂದೆಗೆ ಸೇರಿದ ಜನರನ್ನು ಕುರಿಗಾಹಿಯಂತೆ ಪರಿಪಾಲಿಸಿರಿ. ನಿಮ್ಮ ಸ್ವಾಸ್ತ್ಯವಾಗಿ, ಮಂದೆಯಾಗಿ ಇರುವಂಥ ಜನರು, ಸುತ್ತಮುತ್ತಲು ಫಲವತ್ತಾದ ಹಸಿರು ಭೂಮಿಯಿದ್ದರೂ ಮರಳುಗಾಡಿನಲ್ಲಿ ಪ್ರತ್ಯೇಕವಾಗಿ ಜೀವಿಸುತ್ತಿರುವರು. ಪೂರ್ವಕಾಲದಲ್ಲಿದ್ದಂತೆ, ಈಗ ಅವರು ಬಾಷಾನ್ ಮತ್ತು ಗಿಲ್ಯಾದ್ ನಾಡುಗಳಿಗೆ ತೆರಳಿ ಪೋಷಣೆ ಪಡೆಯಲಿ.

15 ಈಜಿಪ್ಟ್ ದೇಶದಿಂದ ನಮ್ಮನ್ನು ಹೊರತಂದ ದಿನಗಳಲ್ಲಿ ನೀವು ಮಾಡಿದ ಮಹತ್ಕಾರ್ಯಗಳನ್ನು ಮರಳಿ ಮಾಡಿತೋರಿಸಿರಿ. 16ಅನ್ಯ ರಾಷ್ಟ್ರಗಳು ಇವನ್ನು ನೋಡಿ ಅವುಗಳ ಮುಂದೆ ತಮ್ಮ ಶಕ್ತಿಸಾಮರ್ಥ್ಯ ಏನೂ ಇಲ್ಲವೆಂದು ನಾಚಿಕೆಪಟ್ಟು ಬಾಯಮೇಲೆ ಕೈಯಿಟ್ಟುಕೊಳ್ಳುವರು; ಅವರ ಕಿವಿ ಕಿವುಡಾಗುವುದು. 17ನೆಲದ ಮೇಲೆ ಹರಿದಾಡುವ ಹಾವುಹಲ್ಲಿಗಳಂತೆ ಅವರು ಮಣ್ಣು ಮುಕ್ಕುವರು; ಗಡಗಡನೆ ನಡುಗುತ್ತಾ ಬಿಲದಿಂದ ಈಚೆ ಬರುವರು. ಸರ್ವೇಶ್ವರ ಎಂಬ ನಮ್ಮ ದೇವರಾದ ನಿಮ್ಮ ಕಡೆಗೆ ಭಯಭಕ್ತಿಯಿಂದ ತಿರುಗಿಕೊಳ್ಳುವರು.

18 ನಿಮ್ಮಂಥ ದೇವರು ಯಾರಿದ್ದಾರೆ? ತಮ್ಮ ಸ್ವಂತ ಜನರಲ್ಲಿ ಅಳಿದುಳಿದವರ ಅಪರಾಧಗಳನ್ನು ಲೆಕ್ಕಿಸದೆ, ಅವರ ದ್ರೋಹಗಳನ್ನು ಕ್ಷಮಿಸುವಂಥ ದೇವರು ಯಾರಿದ್ದಾರೆ? ನೀವು ನಿತ್ಯಕ್ಕೂ ಕೋಪಿಷ್ಠರಾಗಿರದೆ ಕರುಣೆ ತೋರಿಸುವುದರಲ್ಲೇ ಸಂತುಷ್ಟರಾಗುವಿರಿ. 19ಮತ್ತೊಮ್ಮೆ ನಮಗೆ ದಯೆತೋರಿ. ನಮ್ಮ ಅಪರಾಧಗಳನ್ನು ಅಳಿಸಿಬಿಡಿ; ಅವನ್ನು ತುಳಿದು ಸಮುದ್ರದ ತಳಕ್ಕೆ ತಳ್ಳಿಬಿಡಿ. 20ಪುರಾತನ ಕಾಲದಲ್ಲಿ ನಮ್ಮ ಪಿತೃಗಳಿಗೆ ಪ್ರಮಾಣಮಾಡಿದಂತೆ ಯಕೋಬ ವಂಶದವರಿಗೆ ನಂಬಿಕಸ್ಥರಾಗಿರಿ. ಅಬ್ರಹಾಮನ ವಂಶದವರಿಗೆ ಪ್ರೀತಿಪರರಾಗಿರಿ.